# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1152 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.03.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅತೀ ಹಿಂದುಳಿದ ಗೊಲ್ಲ ಸಮುದಾಯದ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ 2025-26 ನೇ ಸಾಲಿನಲ್ಲಿ ಕಲ್ಪಿಸಲಾದ ಮೀಸಲಾತಿ ಸ್ಥಾನಗಳ ಸಂಖ್ಯೆ ಎಷ್ಟು; 2025-26 ನೇ ಸಾಲಿನಲ್ಲಿ ಪ್ರವರ್ಗ-1 ವಿದ್ಯಾರ್ಥಿ ವೇತನ ಅಥವಾ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಲ್ಲಿ ಅರ್ಜಿಸಲ್ಲಿಸಿ ಅರ್ಹರಿರುವ ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೂ ಅನುದಾನದ ಲಭ್ಯತೆಯನುಸಾರ ವಿದ್ಯಾರ್ಥಿ ವೇತನ ಪಾವತಿ ಮಾಡಲು ಕ್ರಮವಹಿಸಲಾಗುತ್ತಿದೆ.<br>2025-26 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿವಿಧ ಕಾರ್ಯಕ್ರಮಗಳಡಿ ವಿದ್ಯಾರ್ಥಿ ವೇತನ ಪಡೆದ ಪ್ರವರ್ಗ-1ರ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿರುತ್ತದೆ. |

| ಯೋಜನೆಯ ಹೆಸರು | ಪಾವತಿ ಮಾಡಲಾದ ವಿದ್ಯಾರ್ಥಿಗಳ ಸಂಖ್ಯೆ |
|---|---|
| ಮೆಟ್ರಿಕ್-ಪೂರ್ವ ವಿದ್ಯಾರ್ಥಿ ವೇತನ | 22593 |
| ಅಲೆಮಾರಿಅರೆ/ಅರೆಅಲೆಮಾರಿ ಜನಾಂಗದ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ವೇತನ | 32900 |
| ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ | 31620 |
| ಅಲೆಮಾರಿಅರೆ/ಅರೆಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ | 10672 |
| ಶುಲ್ಕ ಮರುಪಾವತಿ | 17766 |
| ವಿದ್ಯಾಸಿರಿ | 5904 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | Riserved Seat ಪಡೆದುಕೊಂಡ ನಂತರ, ವಿದ್ಯಾರ್ಥಿಗಳಿಗೆ Tution Fee Reimmbrusement ಅನ್ನು ತಡವಾಗಿ ನೀಡಲಾಗಿದೆಯೇ; ನೀಡಿದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; ಹಾಗೂ Grivevance Redressal ವ್ಯವಸ್ಥೆ ಕಲ್ಪಿಸಿರುವುದರ ಮಾಹಿತಿ ಒದಗಿಸುವುದು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ಇ-ಆಡಳಿತ ಇಲಾಖೆಯವರು ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡುತ್ತಿರುವ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು ಸದರಿ ಕಾರ್ಯಕ್ರಮಗಳಡಿ ವಿದ್ಯಾರ್ಥಿಗಳ ಆಧಾರ್ ಸಂಖ್ಯೆಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿರುತ್ತದೆ. ಆದರೆ ವಿದ್ಯಾರ್ಥಿಗಳ ಶೈಕ್ಷಣಿಕ |

| | | |
|---|---|---|
| | | ದತ್ತಾಂಶದಲ್ಲಿರುವ ಹೆಸರಿಗೂ ಹಾಗೂ ಆಧಾರ್‌ನಲ್ಲಿರುವ ಹೆಸರಿಗೂ ವ್ಯತ್ಯಾಸವಿರುತ್ತದೆ, ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಲಿಂಕ್ ಮಾಡಿರುವುದಿಲ್ಲ ಮತ್ತು ವಿಶ್ವವಿದ್ಯಾಲಯಗಳಿಂದ ಶೈಕ್ಷಣಿಕ ದತ್ತಾಂಶ ಹಂಚಿಕೊಂಡಿರುವುದಿಲ್ಲ. ಬಾಕಿ ಇರುವ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಜಿಲ್ಲಾ/ತಾಲ್ಲೂಕು ಮತ್ತು ವಿದ್ಯಾರ್ಥಿಗಳ ಲಾಗಿನ್‌ನಲ್ಲಿ ಅವಕಾಶ ನೀಡಲಾಗಿರುತ್ತದೆ.<br><br>ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಸಹಾಯವಾಣಿ ಮತ್ತು ಮೇಲ್ ಮುಖಾಂತರ ಪಡೆದು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಿಬ್ಬಂದಿಯೊಂದಿಗೆ ಸಂಪರ್ಕ ಸಾಧಿಸಿ ಆಗಿಂದ್ದಾಗೆ ಬಗೆಹರಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ರಾಜ್ಯದಲ್ಲಿ ವೃತಿಪರ ಕೋರ್ಸ್‌ಗಳಲ್ಲಿ ಪ್ರವರ್ಗ-1/ಗೊಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ಇರುವ ಮೀಸಲಾತಿ ಮತ್ತು ವಿದ್ಯಾರ್ಥಿ ವೇತನಗಳ ಮಾಹಿತಿ ಒದಗಿಸುವುದು? | **ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)**<br><br>ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಅನುದಾನಿತ ಕೋರ್ಸುಗಳಲ್ಲಿ ಹಾಗೂ ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸರ್ಕಾರಿ ಸೀಟುಗಳಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳಿಗೆ ಶೇ.4ರಷ್ಟು ಸೀಟುಗಳನ್ನು ನಿಗದಿಪಡಿಸಲಾಗಿರುತ್ತದೆ.<br><br>**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**<br><br>ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಲ್ಲಿ ಅರ್ಜಿಸಲ್ಲಿಸಿ ಅರ್ಹರಿರುವ ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೂ ಅನುದಾನದ ಲಭ್ಯತೆಯನುಸಾರ ವಿದ್ಯಾರ್ಥಿ ವೇತನ ಪಾವತಿ ಮಾಡಲು ಕ್ರಮವಹಿಸಲಾಗುತ್ತಿದ್ದು ಹಿಂದುಳಿದ ವರ್ಗಗಳ ಪ್ರವರ್ಗ-1/ಗೊಲ್ಲ ಸಮುದಾಯದ ವಿದ್ಯಾರ್ಥಿಗಳು ಈ ಕೆಳಕಂಡ ವಿದ್ಯಾರ್ಥಿ ವೇತನಗಳನ್ನು ಪಡೆಯಬಹುದಾಗಿರುತ್ತದೆ.<br>1. ಮೆಟ್ರಿಕ್-ಪೂರ್ವ ವಿದ್ಯಾರ್ಥಿ ವೇತನ / ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ವೇತನ<br>2. ಶುಲ್ಕ ಮರುಪಾವತಿ/ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ |

| | | |
|---|---|---|
| | | 3. ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ<br>**4.** ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ |

**ಸಂಖ್ಯೆ:ಹಿಂವಕ 214 ಬಿಂಎಂಎಸ್ 2026**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.